**ಎರಡನೇ ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ ನ್ಯಾಯಾಲಯ, ಮದ್ದೂರು.**

**ಸಿಸಿ 1320/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | - | ನಾಗೇಶ್ | ಚಾ.ಸಾ.-5 |
| ತಂದೆಯ ಹೆಸರು | - | ಈರಯ್ಯ | ಫ್ರಾ.ಸಾ.-3 |
| ವಯಸ್ಸು | - | 40 ವರ್ಷ | |
| ಉದ್ಯೋಗ | - | ವ್ಯವಸಾಯ | |
| ವಾಸಸ್ಥಳ | - | ಉಪ್ಪಾರದೊಡ್ಡಿ | |

ದಿನಾಂಕಃ 13-10-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಅಭಿಯೋಜನೆಯ ಪರಃ ಎ ಪಿ ಪಿ ರವರಿಂದಃ**

ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ಮಹಜರ್ ಆಗಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-2 ಸಿ ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಪೊಲೀಸರು ಏನು ಬರೆದಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ಸುಮಾರು 5-6 ವರ್ಷಗಳ ಹಿಂದೆ ನಾನು ಮೋಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ನನ್ನನ್ನು ಹೊರತುಪಡಿಸಿ ಸದರಿ ನಿಪಿ-2 ಮಹಜರ್ ಗೆ ಯಾರು ಸಹಿ ಮಾಡಿರುತ್ತಾರೆಂದು ನನಗೆ ಗೊತ್ತಿಲ್ಲ. ಸದರಿ ಸಹಿಯನ್ನು ನಾನು ಮಾಡಿದ ತಾರೀಖು, ತಿಂಗಳು ನನಗೆ ಗೊತ್ತಿಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

(ಈ ಹಂತದಲ್ಲಿ ಮಾನ್ಯ ಎಪಿಪಿ ಯವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ-**

ದಿ 24-01-2020 ರಂದು ಮದ್ದೂರು ತಾಃ ಸಾದೊಳ್ಳಲು ಗ್ರಾಮದ ಚಾಸಾ-1 ರವರ ಗ್ರಾಮದ ಜಮೀನಿನಲ್ಲಿ ಪೊಲೀಸರಿಗೆ ಚಾಸಾ-1 ರವರು ತೋರಿಸಿದ ಸ್ಥಳದಲ್ಲಿ ಬೆಳಗ್ಗೆ 10.15-11.00 ಗಂಟೆಯವರೆಗೆ ಚಾಸಾ-1 ಮತ್ತು ನಿಮ್ಮ, ಚಾಸಾ-4 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಿಪಿ-2 ರಲ್ಲಿರುವ ವಿಚಾರಗಳು ನಿಮಗೆ ಎಲ್ಲಾ ಗೊತ್ತಿದ್ದರೂ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ಮಾನ್ಯ ಶ್ರೀ.ಜಿಎನ್ ಎಸ್  ವಕೀಲರಿಂದಃ-**

ಏನು ಇಲ್ಲ.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಗಿದೆ )

ಓ ಹೇ ಕೇ ಸರಿಯಾಗಿದೆಯೆಂದು ಒಪ್ಪಿರುತ್ತಾರೆ.

2 ನೇ ಅಪರ ಸಿವಿಲ್  ನ್ಯಾಯಾಧೀಶರು

ಸಾಕ್ಷಿ ಸಹಿ

ಮತ್ತು ಜೆ ಎಂ ಎಫ್ ಸಿ , ಮದ್ದೂರು.